**ಸದನದಲ್ಲಿ ಉತ್ತರಿಸುವ**
**ಪ್ರಶ್ನೆಗಳ ಪಟ್ಟಿ**
**ಒಟ್ಟು ಪ್ರಶ್ನೆಗಳು – ೧೫**

**ಪಟ್ಟಿ–೦.೨**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ
## ಮಂಗಳವಾರ, ದಿನಾಂಕ: ೧೦ನೇ ಜುಲೈ ೨೦೧೮

---

**ಸಮೂಹ – II**

೧. ಉಪ ಮುಖ್ಯಮಂತ್ರಿಗಳು.
೨. ಲೋಕೋಪಯೋಗಿ ಸಚಿವರು.
೩. ಸಹಕಾರ ಸಚಿವರು.
೪. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.
೫. ನಗರಾಭಿವೃದ್ಧಿ ಹಾಗೂ ವಸತಿ ಸಚಿವರು.
೬. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು.

---

## ರಾಜ್ಯದಲ್ಲಿ ವಿದ್ಯಾರ್ಥಿಗಳು ಮಾದಕ ದ್ರವ್ಯ ವ್ಯಸನಿಗಳಾಗುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**
**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೬ (೩೮+೧೩೯) ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ಪತ್ತೆ ಹಚ್ಚಲಾದ ಮಾದಕ ದ್ರವ್ಯ ವಿರುದ್ಧದ ಪ್ರಕರಣಗಳೆಷ್ಟು ; ಅವು ಯಾವುವು ; ಮತ್ತು ಇಂತಹ ಪ್ರಕರಣಗಳಲ್ಲಿ ಶಾಮೀಲಾದವರು ಯಾರು : (ಜಿಲ್ಲಾವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಆ) ಮಾದಕ ದ್ರವ್ಯ ಸಾಗಾಟ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕಟ್ಟುನಿಟ್ಟಿನ ಕ್ರಮಗಳೇನು; ಮಾದಕ ದ್ರವ್ಯ ಸಾಗಾಟ ಮತ್ತು ಮಾರಾಟದ ವಿರುದ್ಧ ದಾಖಲಾದ ಪ್ರಕರಣಗಳನ್ನು ಇತ್ಯರ್ಥಪಡಿಸಲು ವಿಶೇಷ ನ್ಯಾಯಾಲಯ ಸ್ಥಾಪಿಸಲಾಗಿದೆಯೇ; ಪ್ರಸ್ತುತ ಇರುವ ನ್ಯಾಯಾಲಯಗಳ ಸಂಖ್ಯೆ ಎಷ್ಟು ; ವಿಲೇ ಪ್ರಕರಣಗಳ ಸಂಖ್ಯೆ ಎಷ್ಟು ; ಖುಲಾಸೆಗೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಶಿಕ್ಷೆಗೆ ಒಳಗಾದ ಪ್ರಕರಣಗಳು ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಅತೀ ಹೆಚ್ಚಾಗಿ ಮಾದಕ ದ್ರವ್ಯ ವ್ಯಸನಿಗಳಾತ್ತಿರುವುದು ಹಾಗೂ ಶಾಲಾ ಕಾಲೇಜುಗಳ ಹತ್ತಿರ ಮಾದಕ ದ್ರವ್ಯ ಮಾರಾಟ ಹೆಚ್ಚಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಎಷ್ಟು ಪ್ರಕರಣಗಳು ದಾಖಲಿಸಿದೆ ; ಮಧ್ಯಪಾನ ಅಂಗಡಿಗಳನ್ನು ನಿಯಮ ಮೀರಿ ತೆರೆಯುತ್ತಿದ್ದು, ಈ ಬಗ್ಗೆ ಸರ್ಕಾರ ಮೌನವಾಗಿರಲು ಕಾರಣಗಳೇನು ;

(ಈ) ಕರ್ನಾಟಕದ ಕರಾವಳಿ ಜಿಲ್ಲೆಗಳಿಗೆ ಮಾದಕ ದ್ರವ್ಯ ಪೂರೈಕೆಯಾಗುತ್ತದೆಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಎಷ್ಟು ಕೇಸುಗಳು ದಾಖಲಿಸಲಾಗಿದೆ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಸಮಾಜದ ಮೇಲೆ ಮಾರಕ ಪರಿಣಾಮ ಬೀರುತ್ತಿರುವ ಸಮಾಜ ಘಾತುಕ ಶಕ್ತಿಗಳ ಬಗ್ಗೆ ಮಾಹಿತಿ ಕಲೆ ಹಾಕಿ ಅಂತಹವರನ್ನು ಹತ್ತಿಕ್ಕಲು ಗುಪ್ತದಳವನ್ನು ಬಳಸಲಾಗುವುದೆ ; ಇಲ್ಲವಾದಲ್ಲಿ ಕಾರಣವೇನು ?

## ಬೀದರ್ ಜಿಲ್ಲೆಯಲ್ಲಿರುವ ಸ್ಥಳೀಯ ಸಂಸ್ಥೆಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)**–

೧೭ (೧೪೧) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿರುವ C.M.C/T.M.C ಹಾಗೂ T.P.S ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿರುವ C.M.C/T.M.C ಹಾಗೂ T.P.S ಗಳ ಸಮಗ್ರ ಅಭಿವೃದ್ಧಿಗಾಗಿ ಕಳೆದ ೩ ವರ್ಷಗಳಲ್ಲಿ ಯಾವ ಯೋಜನೆಗಳನ್ನು ರೂಪಿಸಲಾಗಿದೆ ಹಾಗೂ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ; (ವರ್ಷಾವಾರು, ವಾರ್ಡ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ ; ಪೂರ್ಣಗೊಂಡ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳ ವಿವರ ನೀಡುವುದು ; ಅಪೂರ್ಣಗೊಂಡಿರುವುದಕ್ಕೆ ಕಾರಣಗಳೇನು ; (ವಾರ್ಡ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿರುವ C.M.C/T.M.C ಹಾಗೂ T.P.S ಗಳ ವ್ಯಾಪ್ತಿಯಲ್ಲಿ ಎಷ್ಟು ಸಾರ್ವಜನಿಕ ಜಾಗೃತಿ ಸಭೆಗಳನ್ನು ನಡೆಸಲಾಗಿದೆ ? (ದಿನಾಂಕ ಮತ್ತು ವಿಷಯದ ಬಗ್ಗೆ ವಾರ್ಡ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ನಗರಸಭೆ ಹಾಗೂ ಪಟ್ಟಣಗಳಲ್ಲಿ ಹಳೆಯ ಮನೆ ಕೆಡವಿ ಹೊಸಮನೆ ನಿರ್ಮಾಣದ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –** ೧೮ (೧೫೫೫) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿನ ಮಡಿಕೇರಿ ನಗರಸಭೆ ಹಾಗೂ ಇತರೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಈಗಾಗಲೇ ತೆರಿಗೆ ಪಾವತಿಸಿ ಖಾತೆ ಹೊಂದಿರುವವರು ತಮ್ಮ ಜಾಗದಲ್ಲಿರುವ ಹಳೆ ಮನೆ ಕಡವಿ ಹೊಸದಾಗಿ ನಿರ್ಮಿಸಲು ಅಥವಾ ದುರಸ್ಥಿಗೊಳಿಸಲು ಸದರಿ ನಿವೇಶನವನ್ನು ಭೂಪರಿವರ್ತನೆ ಮಾಡಬೇಕೆಂದು ಆದೇಶ ಹೊರಡಿಸಿರುವುದರಿಂದ ಖಾತೆದಾರರಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಆದೇಶವನ್ನು ಹಿಂಪಡೆದು ಹೊಸ ಆದೇಶವನ್ನು ಹೊರಡಿಸಲಾಗುವುದೇ ?

## ಬಿ.ಡಿ.ಎ.ಯಿಂದ ರೆವಿನ್ಯೂ ನಿವೇಶನಕ್ಕೆ ಬದಲಿ ನಿವೇಶನ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೯ (೧೬೯) ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ ಎಂ. ವಿಶ್ವೇಶ್ವರಯ್ಯ ನಗರ ಬಡಾವಣೆಯಲ್ಲಿ ರೆವಿನ್ಯೂ ನಿವೇಶನದಾರರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬದಲಿ ನಿವೇಶನ ಹಂಚಿಕೆ ಮಾಡಲು ನೋಂದಣಿ ಕಾರ್ಡು ನೀಡಬೇಕಾಗಿರುವ ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು ; (ಫಲಾನುಭವಿಗಳ ಹೆಸರುವಾರು ಹಾಗೂ ವಿಳಾಸದೊಂದಿಗೆ ವಿವರ ನೀಡುವುದು)

(ಆ) ನಿವೇಶನದಾರರಿಗೆ ನೋಂದಣಿ ಕಾರ್ಡ್ ನೀಡದಿರಲು ಕಾರಣಗಳೇನು ;

(ಇ) ಹಾಗಿದ್ದಲ್ಲಿ ಇವರಿಗೆ ಬದಲಿ ನಿವೇಶನ ಅಥವಾ ಮಾರುಕಟ್ಟೆ ಬೆಲೆಯ ಹಣವು ದೊರೆಯದಿರುವುದರಿಂದ ಸರ್ಕಾರ ಯಾವ ರೀತಿ ನ್ಯಾಯ ಒದಗಿಸುವುದು ;

(ಈ) ಈ ಸಂಬಂಧ ಕಡತ ಸಂಖ್ಯೆ:ನಅಇ:೧೦೦:ಬೆಂಭೂಸ್ವಾ:೨೦೧೭ರಲ್ಲಿ ಇರುವ ಫಲಾನುಭವಿಗಳು ಯಾರು ಯಾರು ; ಇದರಲ್ಲಿ ಇವರಿಗೆ ಏತಕ್ಕಾಗಿ ನ್ಯಾಯ ದೊರೆಯಲಿಲ್ಲ ;

(ಉ) ಸರ್ಕಾರವು ರೆವಿನ್ಯೂ ನಿವೇಶನ ಕಳೆದುಕೊಂಡ ಬಡವರಿಗೆ ಪ್ರಸ್ತುತ ಇರುವ ಮಾರುಕಟ್ಟೆ ಬೆಲೆಯ ಹಣ ನೀಡುತ್ತದೆಯೇ ? (ವಿವರವಾದ ಮಾಹಿತಿ ನೀಡುವುದು)

## ಸರ್ಕಾರದ ಆದೇಶದ ಹೊರತಾಗಿಯೂ ಗೃಹ ಇಲಾಖೆಯಲ್ಲಿ ಆರ್ಡರ್ಲಿ ಪದ್ಧತಿ ಮುಂದುವರೆದಿರುವ ಬಗ್ಗೆ

**ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦ (೧೭೪) ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗೃಹ ಇಲಾಖೆಯಲ್ಲಿ ಸಾವಿರಾರು ಖಾಲಿ ಹುದ್ದೆಯಿಂದಾಗಿ, ಅನೇಕ ಪ್ರಕರಣಗಳ ತನಿಖೆಯು ವಿಳಂಬವಾಗುತ್ತಿರುವುದು ಹಾಗೂ ಕೆಳಹಂತದ ಸಿಬ್ಬಂದಿಗಳಿಗೆ ಕೆಲಸದ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗೃಹ ಇಲಾಖೆಯಲ್ಲಿ ಮಂಜೂರಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳ ನೇಮಕಾತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಗೃಹ ಇಲಾಖೆಯಲ್ಲಿ ಆರ್ಡರ್ಲಿ ಪದ್ಧತಿಯನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿದೆಯೇ ; ಇಲ್ಲವಾದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ?

## ಮಂಡ್ಯ ನಗರದಲ್ಲಿನ ಉದ್ಯಾನವನಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೨೦ (೧೨೨) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ಉದ್ಯಾನವನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಉದ್ಯಾನವನಗಳ ನಿರ್ವಹಣೆಗೆ ನಗರಸಭೆ ಕೈಗೊಂಡಿರುವ ಅಗತ್ಯ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಉದ್ಯಾನವನಗಳ ನಿರ್ವಹಣೆಯನ್ನು ನಗರ ಸಭೆಯೇ ನಿರ್ವಹಿಸುತ್ತಿದೆಯೇ; ಅಥವಾ ಹೊರಗುತ್ತಿಗೆ ನೀಡಲಾಗಿದೆಯೇ ; (ವಿವರ ನೀಡುವುದು)

(ಈ) ಸದರಿ ಉದ್ಯಾನವನಗಳನ್ನು ಸಮರ್ಪಕವಾಗಿ ನಿರ್ವಹಿಸಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನ್ನಭಾಗ್ಯ ಯೋಜನೆಯಡಿ ಪಡಿತರ ವಿತರಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨ (೧೬೩) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನ್ನಭಾಗ್ಯ ಯೋಜನೆಯಡಿ ಪ್ರತೀ ತಿಂಗಳು ಎಷ್ಟು ಜನರಿಗೆ ಪಡಿತರ ವಿತರಣೆ ಮಾಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಜನ ಅನ್ನಭಾಗ್ಯ ಯೋಜನೆಯ ಲಾಭ ಪಡೆಯುತ್ತಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಯೋಜನೆಯಡಿ ವಿತರಿಸುವ ಅಕ್ಕಿ ಮತ್ತು ಇನ್ನಿತರೆ ಪದಾರ್ಥಗಳಿಗೆ ಕೇಂದ್ರ ಸರ್ಕಾರ ನೀಡುವ ಸಬ್ಸಿಡಿ ಹಣ ಎಷ್ಟು ; ರಾಜ್ಯ ಸರ್ಕಾರ ಭರಿಸುವ ಉಳಿಕೆ ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಯೋಜನೆ ಜಾರಿಗೆ ಬಂದ ನಂತರ ಎ.ಪಿ.ಎಲ್. ಪಡಿತರದಾರರಿಗೆ ಪಡಿತರ ವಿತರಣೆ ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಎ.ಪಿ.ಎಲ್. ಕಾರ್ಡ್‌ದಾರರಿಗೆ ಅಗತ್ಯ ಪ್ರಮಾಣದಲ್ಲಿ ಪಡಿತರ ಪೂರೈಕೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಶ್ರೀ ಅನ್ವರ್ ಮಾನಪ್ಪಾಡಿ ವರದಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೩ (೧೩೧) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಚ್ಛ ನ್ಯಾಯಾಲಯದ ರಿಟ್ ಅರ್ಜಿಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರವು ಅನ್ವರ್ ಮಾನಪ್ಪಾಡಿ ವರದಿಯನ್ನು ಸದನದಲ್ಲಿ ಮಂಡಿಸುವುದಾಗಿ ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸಿರುವುದು ನಿಜವೇ ; ಆ ರಿಟ್ ಅರ್ಜಿಯ ಸಂಖ್ಯೆ ಮತ್ತು ಉಚ್ಛ ನ್ಯಾಯಾಲಯದ ತೀರ್ಪಿನ ವಿವರ ನೀಡುವುದು ;

(ಆ) ರಾಜ್ಯ ಸರ್ಕಾರವು ಶ್ರೀ ಅನ್ವರ್ ಮಾನಪ್ಪಾಡಿ ವರದಿಯನ್ನು ಪರಿಷತ್ತಿನ ಹಕ್ಕು ಬಾಧ್ಯತಾ ಸಮಿತಿಯ ಶಿಫಾರಸ್ಸಿನ ಅನುಗುಣವಾಗಿ ಉತ್ತರ ನೀಡುವುದೇ ?

## ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ (RGHCL) ಅಡಿಯಲ್ಲಿ ಮುಂಡರಗಿ ಪಟ್ಟಣದಲ್ಲಿ ನಿವೇಶನ ಹಂಚಿಕೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೪ (೧೪೬) ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮುಂಡರಗಿ ಪಟ್ಟಣದಲ್ಲಿ ನಗರಸಭೆ ವತಿಯಿಂದ (RGHCL) ಯೋಜನೆ ಅಡಿಯಲ್ಲಿ ನಿವೇಶನ/ಮನೆ ಹಂಚಿಕೆ ಮಾಡಲು ಜಾಗ ಖರೀದಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ಎಕರೆ ಜಮೀನನ್ನು ಯಾವಾಗ ಖರೀದಿಸಲಾಗಿದೆ ; ಇದಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು ;

(ಇ) ಮುಂಡರಗಿ ಪಟ್ಟಣದಲ್ಲಿ ನಿವೇಶನ ಹಂಚಿಕೆ ಮಾಡಲು ಬಡ ಸಾರ್ವಜನಿಕರು ಪದೇ ಪದೇ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ನಿವೇಶನ ಹಂಚಿಕೆ ಪ್ರಕ್ರಿಯೆ ಪ್ರಾರಂಭ ಮಾಡುವಲ್ಲಿ ಇರುವ ತೊಂದರೆ ಏನು ? (ವಿವರ ನೀಡುವುದು)

## ಶಿವಮೊಗ್ಗ ನಗರದಲ್ಲಿ ಒಳಚರಂಡಿ ಸಂಪರ್ಕ ಒದಗಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫ (೧೩೪) ನಗರಾಭಿವೃದ್ಧಿ ಹಾಗೂ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಿವಮೊಗ್ಗ ನಗರದಲ್ಲಿ ಸರ್ಕಾರ ಒಳಚರಂಡಿ ಸಂಪರ್ಕ ಒದಗಿಸಲು ಯಾವ ಯೋಜನೆಯಡಿಯಲ್ಲಿ ಕಾಮಗಾರಿಗಳನ್ನು ಕೈಗೊಂಡಿರುತ್ತದೆ ; (ವಿವರ ನೀಡುವುದು)

(ಆ) ಈ ಯೋಜನೆಯ ಅಂದಾಜು ವೆಚ್ಚದ ವಿವರ ನೀಡುವುದು ;

(ಇ) ಈ ಯೋಜನೆಯ ಕಾಮಗಾರಿಯನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ಕಿಲ್ ಗೇಮ್‌ಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೨೬ (೧೪೦) ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಸ್ಕಿಲ್ ಗೇಮ್ ಮತ್ತು ಜುಗಾರಿ ಕ್ಲಬ್‌ಗಳಿಗೆ ಪರವಾನಗಿ ನೀಡಲಾಗಿದೆ : ಪರವಾನಗಿ ಪಡೆಯಲು ಪೊಲೀಸ್ ನಿರಾಕ್ಷೇಪಣಾ ಪತ್ರ ಪಡೆಯದೇ ಕ್ಲಬ್‌ಗಳು ತೆರೆದಿರುವ ಕುರಿತು ವಿವರ ನೀಡುವುದು ; ಪರವಾನಗಿ ಇಲ್ಲದೆ ತೆರೆದ ಕ್ಲಬ್‌ಗಳನ್ನು ನಿರ್ಬಂಧಿಸಲು ಇಲಾಖೆ ಸೂಕ್ತ ಕಾನೂನು ತರಲು ಬಯಸಿದೆಯೇ ; (ವಿವರ ನೀಡುವುದು)

(ಆ) ನಿಯಮ ಮೀರಿ ಕ್ಲಬ್‌ಗಳಲ್ಲಿ ಅಮಾಯಕರ ಸುಲಿಗೆ ಆಗುತ್ತಿದ್ದು ಇಲಾಖೆ ಕ್ಲಬ್ ಮಾಲೀಕರ ಜೊತೆ ಶಾಮೀಲು ಆಗಿರುವುದರ ಬಗ್ಗೆ ದೂರುಗಳಿದ್ದು, ಉನ್ನತ ಅಧಿಕಾರಿಗಳು ಕ್ರಮಕೈಗೊಂಡಿದಾರೆಯೇ ; (ವಿವರ ನೀಡುವುದು)

(ಇ) ಮಂಗಳೂರು ಕಮೀಷನರೇಟ್ ವ್ಯಾಪ್ತಿಯ ಒಳಗೆ ಸುಮಾರು ೧೦೦ ಕ್ಕೂ ಅಧಿಕ ಕ್ಲಬ್‌ಗಳು ವ್ಯವಸ್ಥಿತವಾಗಿ ಸಾರ್ವಜನಿಕರನ್ನು ಮತ್ತು ಅಮಾಯಕರನ್ನು ದಾರಿ ತಪ್ಪಿಸುತ್ತಿದ್ದು ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ನಗರದಲ್ಲಿ ಒಟ್ಟು ನೋಂದಾಯಿತ ಮತ್ತು ನೋಂದಾವಣೆ ಇಲ್ಲದ ಕ್ಲಬ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಮಂಗಳೂರು ಕಮೀಷನರೇಟ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಮಸಾಜ್ ಪಾರ್ಲರ್‌ಗಳು ತಲೆ ಎತ್ತಿದ್ದು ಅನೈತಿಕ ಚಟುವಟಿಕೆ ನಡೆಯುತ್ತಿರುವುದರ ಬಗ್ಗೆ ವ್ಯಾಪಕವಾಗಿ ದೂರುಗಳಿದ್ದರೂ ಪೊಲೀಸ್ ಇಲಾಖೆ ಮೌನ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಸರ್ಕಾರವು ಕೈಗೊಂಡ ಕ್ರಮವೇನು ?

## ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಕೇಬಲ್‌ಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೨೭ (೧೭೩) ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರದ ವ್ಯಾಪ್ತಿಯಲ್ಲಿ OFC, Telephone, Cable TV and Internet, ವಿದ್ಯುತ್ ತಂತಿ ಮುಂತಾದ ಕೇಬಲ್‌ಗಳು ಅಪಾಯದ ಸ್ಥಿತಿಯಲ್ಲಿ ಪಾದಚಾರಿ/ರಸ್ತೆಯ ಮೆಲೆ ಬಿದ್ದಿರುವ ಪ್ರಕರಣಗಳು ಸರ್ಕಾರ/ಪಾಲಿಕೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, (ವಿವರವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

(ಆ) ಪಾದಚಾರಿ ಮಾರ್ಗ/ರಸ್ತೆಗಳ ಮೇಲೆ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾಲಕರಿಗೆ ಅಡಚಣೆ ಮಾಡುತ್ತಿರುವ ಕೇಬಲ್‌ಗಳ ವಾರಸುದಾರರು/ಸಂಬಂಧಿಸಿದ ಸಂಸ್ಥೆಗಳ ಮೇಲೆ ಸರ್ಕಾರ/ಪಾಲಿಕೆ/ಪೊಲೀಸ್ ಹಾಗೂ ಸರ್ಕಾರದ ಇನ್ನಿತರ ಇಲಾಖೆಗಳಿಂದ ಇಲ್ಲಿಯವರೆವಿಗೂ ಹಾನಿಕಾರಕ/ಅನಾನುಕೂಲಕ್ಕೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳಲ್ಲಿ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ; ಇದ್ದಲ್ಲಿ (ವಿವರವಾದ ಮಾಹಿತಿಯನ್ನು ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಈ ರೀತಿಯ ಕೇಬಲ್‌ಗಳಿಂದ ತೊಂದರೆಗೆ ಒಳಗಾಗಿರುವ ಸಾರ್ವಜನಿಕರಿಗೆ/ವಾಹನ ಸವಾರರಿಗೆ ಸರ್ಕಾರ ಅಥವಾ ಪಾಲಿಕೆಯಿಂದ ಯಾವ ಪರಿಹಾರ ನೀಡಲಾಗಿದೆ ; ನೀಡಿದ್ದಲ್ಲಿ ಅಪಘಾತ/ಹಾನಿಯಾಗಿರುವ ಪ್ರಕರಣಗಳ ಮಾಹಿತಿಯನ್ನು ನೀಡುವುದು ;

(ಈ) ಕಳೆದ ೫ ವರ್ಷಗಳಲ್ಲಿ ಪಾಲಿಕೆ ಹಾಗೂ ಖಾಸಗಿ ಸಂಸ್ಥೆಗಳ ನಿರ್ಲಕ್ಷ್ಯಕ್ಕೆ ಒಳಗಾಗಿ ಸಂಬಂಧಿಸಿದ ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳಲ್ಲಿ ಪರಿಹಾರ ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಮೈಸೂರು ಬೆಂಗಳೂರು ಹೆದ್ದಾರಿಯ ಅಗಲೀಕರಣ ಮತ್ತು ಆಧುನೀಕರಣದ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮ (೧೧೧) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು–ಬೆಂಗಳೂರು ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ ಎಂದು ಘೋಷಿಸಲಾಗಿದೆಯೇ ; ಈ ಹೆದ್ದಾರಿಯನ್ನು ಆರು ಅಥವಾ ಎಂಟು ಪಥದ ರಸ್ತೆಯನ್ನಾಗಿ ಆಧುನಿಕ ಮಾದರಿಯಲ್ಲಿ ಅಗಲೀಕರಣ ಮಾಡಲು ಡಿ.ಪಿ.ಆರ್. (ವಿಸ್ತೃತ ಯೋಜನಾ ವರದಿ) ಅಂದಾಜು ಪಟ್ಟಿ ಅಂತಿಮವಾಗಿ ಸಿದ್ಧವಾಗಿದೆಯೇ; ಇವುಗಳಿಗೆ ಅನುಮೋದನೆ ದೊರಕಿದೆಯೇ ; (ವಿವರ ಒದಗಿಸುವುದು)

(ಆ) ಮೈಸೂರು–ಬೆಂಗಳೂರು ಹೆದ್ದಾರಿಯ ಅಗಲೀಕರಣ ಕಾರ್ಯ ಯಾವಾಗ ಆರಂಭವಾಗುವುದು ; ಹಿಂದಿನ ಸರ್ಕಾರದಲ್ಲಿ ಈ ಕಾರ್ಯಾರಂಭಕ್ಕೆ ಲೋಕೋಪಯೋಗಿ ಸಚಿವರು ಚಾಲನೆ ನೀಡಿರುವರೇ ; (ವಿವರ ಒದಗಿಸುವುದು)

(ಇ) ಈ ಹೆದ್ದಾರಿ ವಿಸ್ತೀರ್ಣಕ್ಕೆ ಅಗತ್ಯವಾದ ಭೂಮಿ ಎಷ್ಟು ; ಈ ಭೂಮಿಯನ್ನು ಗುರುತಿಸಲಾಗಿದೆಯೇ ಹಾಗೂ ಭೂ ಸ್ವಾಧೀನ ಕಾರ್ಯವನ್ನು ಪ್ರಾರಂಭ ಮಾಡಲಾಗಿದೆಯೇ; ಇದುವರೆಗೆ ಎಷ್ಟು ಭೂ ಸ್ವಾಧೀನ ಪ್ರಕರಣಗಳಲ್ಲಿ ಕಾಯಿದೆ ಅನ್ವಯ ವಿವಿಧ ಹಂತದ ನೋಟಿಫಿಕೇಷನ್‌ಗಳನ್ನು ಹೊರಡಿಸಲಾಗಿದೆ ;

(ಈ) ಈ ಹೆದ್ದಾರಿಯಲ್ಲಿ ಎಲ್ಲೆಲ್ಲಿ ಬೈಪಾಸ್, ಗ್ರೇಡ್ ಸೆಪರೇಟರ್, ಮೇಲುಸೇತುವೆ, ಕೆಳಸೇತುವೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ? (ವಿವರ ಒದಗಿಸುವುದು)

## ರಾಜ್ಯ ಹೆದ್ದಾರಿಗಳ ದುಸ್ಥಿತಿ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೯ (೦೩) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯರಸ್ತೆಗಳಲ್ಲಿ ಮಳೆಯಿಂದ ಉಂಟಾಗಿರುವ ದುಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವಾರು ಕಡೆಗಳಲ್ಲಿ ಗುಂಡಿಗಳು, ಅವೈಜ್ಞಾನಿಕ ರಸ್ತೆ ಹಂಪ್ಸ್‌ಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಎಷ್ಟೋ ಕಡೆ ಸೇತುವೆಗಳು ಕೂಡ ಬಿರುಕು ಬಿಟ್ಟು ದುಸ್ಥಿತಿಯಲ್ಲಿದ್ದು, ಹಾಳಾಗಿರುವ ಸೇತುವೆಗಳ ದುರಸ್ತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಏನು ?

## ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ೨ನೇ ಹಂತದ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್** (ವಿಧಾನಸಭೆಯಿಂದ ಚುನಾಯಿತರಾದವರು) –

೩೦ (೧೧೯) ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಮೊದಲನೇ ಹಂತದ ಎಷ್ಟು ಆಕಾಂಕ್ಷಿಗಳಿಗೆ ನಿವೇಶನ ಹಂಚಿಕೆ ಮಾಡಲಾಗಿದೆ ; (ವಿಸ್ತೀರ್ಣವಾರು ಮಾಹಿತಿ ನೀಡುವುದು)

(ಆ) ೨ನೇ ಹಂತದಲ್ಲಿ ಎಷ್ಟು ಆಕಾಂಕ್ಷಿಗಳಿಗೆ ನಿವೇಶನ ಹಂಚಿಕೆ ಮಾಡಲು ಉದ್ದೇಶಿಸಲಾಗಿದೆ (ವಿಸ್ತೀರ್ಣವಾರು ವಿವರ ನೀಡುವುದು) ; ಅದರಲ್ಲಿ ಹಂಚಿಕೆ ಮಾಡಲಾದ ನಿವೇಶನಗಳೆಷ್ಟು ; ಹಂಚಿಕೆ ಮಾಡದಿದ್ದಲ್ಲಿ ಕಾರಣವೇನು ; (ಪೂರ್ಣ ವಿವರ ನೀಡುವುದು)

(ಇ) ಸದರಿ ಬಡಾವಣೆಯ ನಿವೇಶನ ಆಕಾಂಕ್ಷಿಗಳಿಗೆ ಯಾವ ಕಾಲಮಿತಿಯೊಳಗೆ ನಿವೇಶನ ಹಂಚಿಕೆ ಮಾಡಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 281, ಪ್ರತಿಗಳು 1500